ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 10/9/2020

# ಮಂಗಳೂರು ಸಿಎಎ ಗಲಭೆ ಆರೋಪಿಗಳಿಗೆ ಜಾಮೀನು

» ಸುಪ್ರೀಂ ಕೋರ್ಟ್ ಆದೇಶ

ನವದೆಹಲಿ: ರಾಷ್ಟ್ರೀಯ ಪೌರತ್ವ ಕಾಯ್ದೆ (ಸಿಎಎ), ರಾಷ್ಟ್ರೀಯ ಪೌರತ್ವ ನೋಂದಣಿ (ಎನ್‌ಆರ್‌ಸಿ) ವಿರೋಧಿಸಿ ನಡೆಸಿದ್ದ ಪ್ರತಿಭಟನೆ ಹಾಗೂ ಹಿಂಸಾಚಾರ ಘಟನೆಯ ಎಲ್ಲ 21 ಆರೋಪಿಗಳಿಗೆ ಸುಪ್ರೀಂಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಈ ಕಾಯ್ದೆಗಳನ್ನು ವಿರೋಧಿಸಿ 2019ರ ಡಿಸೆಂಬರ್‌ನಲ್ಲಿ ಮಂಗಳೂರಿನಲ್ಲಿ ದೊಡ್ಡಮಟ್ಟದ ಪ್ರತಿಭಟನೆ ಆಯೋಜಿಸಲಾಗಿತ್ತು. ಆದರೆ, ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿ ಇಬ್ಬರು ಸಾವಿಗೀಡಾಗಿದ್ದರು. ಪ್ರಕರಣದಲ್ಲಿ ಆರೋಪಿಯಾದ ಮಹಮ್ಮದ್ ಆಸಿಕ್ ಸೇರಿ 21 ಮಂದಿಯನ್ನು ಪೊಲೀಸರು ಬಂಧಿಸಿದ್ದರು.

ಫೆ.17ರಂದು ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ಜಾಮೀನು ನೀಡಿತ್ತಾದರೂ, ಇದನ್ನು ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಿತ್ತು. ಹೀಗಾಗಿ, ಜಾಮೀನಿಗೆ ಮಾ.6ರಂದು ಸುಪ್ರೀಂಕೋರ್ಟ್ ಮಧ್ಯಂತರ ತಡೆ ನೀಡಿತ್ತು. ಪ್ರಕರಣದ ವಿಚಾರಣೆಯನ್ನು ಬುಧವಾರ ಕೈಗೆತ್ತಿಕೊಂಡ ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೋಬ್ಡೆ ನೇತೃತ್ವದ ತ್ರಿಸದಸ್ಯ ನ್ಯಾಯಪೀಠ, ಮಧ್ಯಂತರ ತಡೆ ತೆರವುಗೊಳಿಸಿ ಷರತ್ತುಬದ್ಧ ಜಾಮೀನು ನೀಡುವುದಾಗಿ ತಿಳಿಸಿತು. 14 ದಿನಕ್ಕೊಮ್ಮೆ ಪ್ರತಿ ಸೋಮವಾರದಂದು ಸ್ಥಳೀಯ ಪೊಲೀಸ್ ಠಾಣೆಗೆ ತೆರಳಿ ವರದಿ ಮಾಡಬೇಕು ಎಂದು ಆರೋಪಿಗಳಿಗೆ ಸೂಚಿಸಿದ ನ್ಯಾಯಪೀಠ, ಬಿಡುಗಡೆಗೆ ಮುನ್ನ ಪ್ರತಿಯೊಬ್ಬರೂ 25,000 ರೂ. ಜಾಮೀನು ಬಾಂಡ್‌ಗಳನ್ನು ನೀಡಬೇಕು. ಅಲ್ಲದೆ, ಮುಂದೆಂದೂ ಹಿಂಸಾಚಾರ ಚಟುವಟಿಕೆ ಅಥವಾ ಸಭೆಗಳಲ್ಲಿ ಭಾಗವಹಿಸುವಂತಿಲ್ಲ ಎಂದೂ ಎಚ್ಚರಿಕೆ ನೀಡಿತು.

